ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಗ್ರಾಮ ಪಂಚಾಯಿತಿಗಳು ಹಾಗೂ ಸಿಬ್ಬಂದಿ ನೇಮಕಾತಿ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

866 (1113) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮ ಪಂಚಾಯಿತಿಗಳನ್ನು ಸಬಲೀಕರಣಗೊಳಿಸಿ ಗ್ರಾಮೀಣ ಮಟ್ಟದಲ್ಲಿಯೇ ಸಾರ್ವಜನಿಕರಿಗೆ ನೂರಾರು ಯೋಜನೆಗಳನ್ನು ಒದಗಿಸಲು ಬಾಪೂಜಿ ಸೇವಾ ಕೇಂದ್ರ ಆರಂಭಿಸಿರುವುದು ನಿಜವೇ; ರಾಜ್ಯದ ಬಹುತೇಕ ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಜ್ಯದಲ್ಲಿ ಇರುವ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಮಂಜೂರಾಗಿರುವ ಒಟ್ಟು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳ ಹುದ್ದೆಗಳ ಸಂಖ್ಯೆ ಎಷ್ಟು;

(ಈ) ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಒಟ್ಟು ಪಿ.ಡಿ.ಓ ಗಳ ಮತ್ತು ಕಾರ್ಯದರ್ಶಿಗಳ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಉ) ಯಾವ ಕಾಲ ಮಿತಿಯಲ್ಲಿ ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು? (ವಿವರ ನೀಡುವುದು)